ಯಶವಂತಪುರದ ಬಳಿ ಕಟ್ಟಿರುವ ಸೇತುವೆಯಲ್ಲಿ ಬಿರುಕು ಬಿಟ್ಟಿರುವುದು.

೧೫೭. ಶ್ರೀ ಪಿ. ಜಿ. ಆರ್. ಸಿಂಧ್ಯ (ಕನಕಪುರ).—ಮಾನ್ಯ ಲೋಕೋಪಯೋಗಿ ಮತ್ತು ನೀರಾವರಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಷ್ಟ್ರೀಯ ಹೆದ್ದಾರಿ ಯೋಜನೆಯಲ್ಲಿ ಲೋಕೋಪಯೋಗಿಯವರು ಬೆಂಗಳೂರಿನ ಯಶವಂತಪುರದ ಬಳಿ ಒಂದು ಸೇತುವೆ ನಿರ್ಮಿಸಿರುವುದು ನಿಜವೇ ?

ಆ) ಈ ಸೇತುವೆ ಉದ್ಘಾಟನೆಯನ್ನು ಯಾರಿಂದ ಮತ್ತು ಯಾವಾಗ ಮಾಡಲಾಯಿತು ?

ಇ) ಈಗ ಸೇತುವೆಯಲ್ಲಿ ಬಿರುಕು ಬಿಟ್ಟಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಈ) ಹಾಗಿದ್ದಲ್ಲಿ ಇದನ್ನು ದುರಸ್ತಿ ಮಾಡಲು ಕ್ರಮ ಕೈಗೊಳ್ಳಲಾಗಿದೆಯೇ ?

ಉ) ಈ ಕಳಪೆ ಕೆಲಸ ಮಾಡಿದವರ ಮೇಲೆ ಕ್ರಮ ಕೈಗೊಳ್ಳಲಾಗಿದೆಯೇ ?

ಶ್ರೀ ಜಿ. ಪುಟ್ಟಸ್ವಾಮಿ ಗೌಡ (ಲೋಕೋಪಯೋಗಿ ಮತ್ತು ನೀರಾವರಿ ಮಂತ್ರಿಗಳು).—

ಅ) ಸೇತುವೆಯನ್ನು ಮುನಿಸಿಪಲ್ ಲಿಂಕ್ ಆಡಿ ರಾಜ್ಯ ಅನುದಾನದಿಂದ ಕಟ್ಟಿದೆ.

ಆ) ಈ ಸೇತುವೆಯ ಉದ್ಘಾಟನೆಯನ್ನು ೨೯–೧೦–೮೮ ರಂದು ಕರ್ನಾಟಕದ ಆಗಿನ ಮುಖ್ಯ ಮಂತ್ರಿಗಳಾಗಿದ್ದ ಶ್ರೀ ಎಸ್.ಆರ್. ಬೊಮ್ಮಾಯಿಯವರಿಂದ ಮಾಡಲಾಯಿತು.

ಇ) ಬಿರುಕುಗಳು ಬಿಟ್ಟಿರುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ಉ) ಉದ್ಭವಿಸುವುದಿಲ್ಲ.

ಶಹಾಪುರ ತಾಲ್ಲೂಕಿನ ಉರಸಗುಂಡಗಿ ಗ್ರಾಮದ ಬಳಿ ಭೀಮಾನದಿಗೆ ಅಡ್ಡಲಾಗಿ ನಿರ್ಮಿಸಿರುವ ಸೇತುವೆ.

೧೭೧. ಶ್ರೀ ಶಿವಶೇಖರಗೌಡ ಶಿರವಾಳ (ಶಹಾಪುರ).—ಮಾನ್ಯ ಲೋಕೋಪಯೋಗಿ ಮತ್ತು ನೀರಾವರಿ ಹಾಗೂ ಇಂಧನ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಗುಲ್ಬರ್ಗಾ ಜಿಲ್ಲೆಯ ಶಹಾಪುರ ತಾಲ್ಲೂಕಿನ ಉರಸಗುಂಡಗಿ ಗ್ರಾಮದ ಬಳಿ ಭೀಮಾನದಿಗೆ ಅಡ್ಡಲಾಗಿ ಸೇತುವೆ ನಿರ್ಮಾಣದ ಸಲುವಾಗಿ ೧.೪೦ ಲಕ್ಷ ರೂಪಾಯಿಗಳ ಅಂದಾಜು ತಯಾರಿಸಿರುವುದು ನಿಜವೇ ?

ಆ) ಹಾಗಿದ್ದಲ್ಲಿ ಈ ಕೆಲಸಕ್ಕೆ ಕೇಂದ್ರ ಸರ್ಕಾರದಿಂದ ಧನ ಸಹಾಯವೇನಾದರೂ ಬಂದಿದೆಯೇ ?

ಇ) ಈ ಕಾರ್ಯವನ್ನು ಎಂದಿನಿಂದ ಪ್ರಾರಂಭಿಸಲಾಗುವುದು ?

ಶ್ರೀ ಜಿ. ಪುಟ್ಟಸ್ವಾಮಿಗೌಡ (ಲೋಕೋಪಯೋಗಿ ಮತ್ತು ನೀರಾವರಿ ಮಂತ್ರಿಯವರು).—

ಅ) ಗುಲ್ಬರ್ಗಾ ಜಿಲ್ಲೆ ಶಹಾಪುರ ತಾಲ್ಲೂಕಿನ ಸ್ವಾಂತಿ ದೇವಸ್ಥಾನದ ಬಳಿ (ಉರಸಗುಂಡಗಿ ಗ್ರಾಮದ ಬಳಿ) ಭೀಮಾ ನದಿಗೆ ಅಡ್ಡಲಾಗಿ ಸೇತುವೆ ನಿರ್ಮಾಣ ಕಾಮಗಾರಿಯಂ ರೂ. ೧೪೦ ಲಕ್ಷ ಅಂದಾಜು ಮೊತ್ತಕ್ಕೆ ೧೯೯೦–೯೧ನೇ ಸಾಲಿನ ಕೇಂದ್ರ ರಸ್ತೆ ಅನುದಾನ ಸಿ.ಆರ್.ಎಫ್. ಯೋಜನೆಯಡಿಯಲ್ಲಿ ಕೇಂದ್ರ ಸರ್ಕಾರದ ಮಂಜೂರಾತಿಗಾಗಿ ದಿ : ೧೮–೧೦–೯೯ರಂದು ಶಿಫಾರಸ್ಸು ಮಾಡಲಾಗಿದೆ.

ಆ) ಸದರಿ ಪ್ರಸ್ತಾವನೆಗೆ ಕೇಂದ್ರ ಸರ್ಕಾರದ ಮಂಜೂರಾತಿ ದೊರೆತಿಲ್ಲದ ಕಾರಣ ಧನಸಹಾಯದ ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ಕೇಂದ್ರ ಸರ್ಕಾರದ ಮಂಜೂರಾತಿ ದೊರೆತ ನಂತರ ಈ ಕೆಲಸವನ್ನು ಪ್ರಾರಂಭಿಸಲು ಕ್ರಮ ತೆಗೆದು ಕೊಳ್ಳಲಾಗುವುದು.